## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1046(1136)

ಸದಸ್ಯರ ಹೆಸರು : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 17.03.2025.

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಇಲ್ಲದೆ ಸರ್ಕಾರಿ ಶಾಲೆಗಳಲ್ಲಿ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿರುತ್ತದೆ. ದೈಹಿಕ ಶಿಕ್ಷಕರಿಲ್ಲದ ಶಾಲೆಯಲ್ಲಿನ ಸಹ ಶಿಕ್ಷಕರು ಆಸಕ್ತಿಯಿಂದ ವಿದ್ಯಾರ್ಥಿಗಳಿಗೆ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರೋತ್ಸಾಹ ನೀಡುತ್ತಿರುತ್ತಾರೆ. |
| ಆ | ದೈಹಿಕ ಶಿಕ್ಷಣ ಪಠ್ಯ ಬೋಧನೆ, ಪರೀಕ್ಷೆ, ಮೌಲ್ಯ ಮಾಪನವು ಸಂಪರ್ಕವಾಗಿ ಅನುಷ್ಠಾನಗೊಳಿಸಲಾಗಿದೆಯೇ; (ಮಾಹಿತಿಯನ್ನು ನೀಡುವುದು) | ದೈಹಿಕ ಶಿಕ್ಷಣವು ಬೋಧನಾ ಮತ್ತು ಪರೀಕ್ಷಾ ವಿಷಯವಾಗಿರುತ್ತದೆ. ಈ ಸಂಬಂಧ ತಾತ್ವಿಕ ವಿಷಯಗಳಿಗೆ ಶೇ 40 ಅಂಕಗಳು ಹಾಗೂ ಪ್ರಾಯೋಗಿಕ ಚಟುವಟಿಕೆಗಳಿಗೆ ಶೇ 60 ಅಂಕಗಳನ್ನು ನಿಗಧಿಪಡಿಸಿ FA1, FA2, SA1, FA3, FA4, SA2 ಮಾದರಿಯಲ್ಲಿ ಪರೀಕ್ಷೆ ನಡೆಸಿ ಮೌಲ್ಯಮಾಪನ ಮಾಡಿ ದಾಖಲೆಗಳನ್ನು ನಿರ್ವಹಿಸಲಾಗುತ್ತಿದೆ. |
| ಇ | ಸರ್ಕಾರಿ ಶಾಲೆಗಳ ಮಕ್ಕಳು ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆಯುವಲ್ಲಿ ವಂಚಿತರಾಗಿ ಮುಂದೆ ಕ್ರೀಡಾ ಕೋಟಾದಡಿ ನೇಮಕಾತಿಯ ಸೌಲಭ್ಯ ಪಡೆಯಲು ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ದೈಹಿಕ ಶಿಕ್ಷಣ ಶಿಕ್ಷಕರು ಎಲ್ಲಾ ವಿದ್ಯಾರ್ಥಿಗಳಿಗೆ ತರಬೇತಿಯನ್ನು ನೀಡಿ ಹೋಬಳಿ, ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಕ್ರಮ ಕೈಗೊಂಡಿರುತ್ತಾರೆ. |
| ಈ | ಶಿಸ್ತು, ರಾಷ್ಟ್ರೀಯ ಭಾವೈಕ್ಯತೆ, ಮೌಲ್ಯಗಳು ಹಾಗೂ ದೈಹಿಕ ಚಟುವಟಿಗಳ ಕೊರತೆಯಿಂದ ಮಕ್ಕಳ ಸಮಗ್ರ ಬೆಳವಣಿಗೆ ಮಾರಕವಾಗುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಲಾಗಿದೆ; ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ದೈಹಿಕ ಶಿಕ್ಷಣ ಶಿಕ್ಷಕರು ದೈಹಿಕ ಶಿಕ್ಷಣ ಅವಧಿಯಲ್ಲಿ ಶಿಸ್ತು, ರಾಷ್ಟ್ರೀಯ ಭಾವ್ಯಕ್ಯತೆ, ಮೌಲ್ಯಗಳ ಕುರಿತಾಗಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುತ್ತಿರುತ್ತಾರೆ. ಹೊರಾಂಗಣ ಕ್ರೀಡೆಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ದೈಹಿಕ ಚಟುವಟಿಕೆಗಳ ಕೊರತೆಯಾಗದಂತೆ ಕ್ರಮ ಕೈಗೊಂಡಿರುತ್ತಾರೆ. |

ಇಪಿ 107 ಎಸ್‌ಇಎಸ್ 2025

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು